PRAMC
EIC
SE-1
SE-2
DS
EE
AEE-1
AEE-2
AEE-3

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:-ಕೆಶಿಫ್, ಕೆ.ಆರ್.ಡಿ.ಸಿಎಲ್ ಮತ್ತು ಲೋಕೋಪಯೋಗಿ ಇಲಾಖೆಯ ವತಿಯಿಂದ ಅಭಿವೃದ್ಧಿಪಡಿಸಲಾದ 1329.47 ಕಿಮೀ ಉದ್ದದ ರಸ್ತೆಗಳ ಮೇಲ್ಮೈ ಪದರಗಳ ನವೀಕರಣ ಹಾಗೂ ಇತರೆ ಕಾಮಗಾರಿಯನ್ನು ಕೈಗೆತ್ತಿಗೊಳ್ಳಲು ರೂ. 440.00 ಕೋಟಿಗಳ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

ಓದಲಾಗಿದೆ:- ವ್ಯವಸ್ಥಾಪಕ ನಿರ್ದೇಶಕರು ಕೆಆರ್‌ಡಿಸಿಎಲ್ ರವರ ಪತ್ರ ಸಂಖ್ಯೆ: ಕರಅನಿನಿ/ವ್ಯನಿ/ನಿರ್ವಹಣೆ ಅಂದಾಜು/2022-23/1018, ದಿನಾಂಕ: 05-07-2020.

* * *

**ಪ್ರಸ್ತಾವನೆ:**

ಕೆಶಿಫ್ ಮತ್ತು ಕೆ.ಆರ್.ಡಿ.ಸಿ.ಎಲ್ ವತಿಯಿಂದ ಅಭಿವೃದ್ಧಿ ಪಡಿಸಲಾದ 27 ರಾಜ್ಯ ಹೆದ್ದಾರಿ ರಸ್ತೆಗಳಲ್ಲಿ ರಸ್ತೆ ಬಳಕೆದಾರರ ಟೋಲ್ ಶುಲ್ಕ ಸಂಗ್ರಹಣೆಯನ್ನು ಮಾಡಲು ಅನುಮೋದನೆಯನ್ನು ನೀಡಲಾಗಿರುತ್ತದೆ. ಸದರಿ ರಸ್ತೆಗಳ ಮೇಲೆ ಬಳಕೆದಾರರ ಶುಲ್ಕವನ್ನು ಸಂಗ್ರಹಣೆ ಮಾಡುವುದರಿಂದ ಕೆ.ಆರ್.ಡಿ.ಸಿ.ಎಲ್ ಸಂಸ್ಥೆಯನ್ನು ಆರ್ಥಿಕವಾಗಿ ಸಧೃಡಪಡಿಸಿ, ಸಂಸ್ಥೆಯು ಸ್ವಂತ ಆದಾಯದಲ್ಲಿ ಕಾರ್ಯನಿರ್ವಹಿಸಲು ಹಾಗೂ ಸದರಿ ರಸ್ತೆಯ ಭಾಗಗಳನ್ನು ನಿರ್ವಹಿಸಲು ಅನುವಾಗಿ, ಪ್ರಗತಿಪರ ಮೂಲ ಸೌಕರ್ಯಗಳೊಂದಿಗೆ ರಾಜ್ಯ ರಸ್ತೆ ಸಂಪರ್ಕ ಜಾಲವನ್ನು ಉತ್ತಮ ಪಡಿಸಲು ಅವಕಾಶ ಕಲ್ಪಿಸಲಾಗುತ್ತಿದೆ. ರಸ್ತೆಗಳ ಅಭಿವೃದ್ಧಿಗಾಗಿ ಬ್ಯಾಂಕ್‌ಗಳಿಂದ ಪಡೆದಿರುವ ಸಾಲವನ್ನು ತೀರುವಳಿ ಮಾಡಲು ಟೋಲ್ ಆದಾಯವನ್ನು ಉಪಯೋಗಿಸಲಾಗುತ್ತಿದೆ.

ಪ್ರಸ್ತಾವನೆಯಲ್ಲಿ ಒಟ್ಟು 1329.47 ಕಿಮೀ ಉದ್ದದ ರಸ್ತೆಗಳ ನಿರ್ವಹಣೆಯನ್ನು ಕೈಗೊಳ್ಳಲು ಉದ್ದೇಶಿಸಿದ್ದು, ಈ ಪೈಕಿ 681.27 ಕಿಮೀ ಉದ್ದದ ರಸ್ತೆಯನ್ನು ಮೇಲ್ಪದರಗಳ ನವೀಕರಣಕ್ಕಾಗಿ ಹಾಗೂ 648.20 ಕಿಮೀ ಉದ್ದದ ರಸ್ತೆಯಲ್ಲಿ ಸಣ್ಣ ಸುಧಾರಣೆ ಕಾಮಗಾರಿಗಳನ್ನು ಪ್ರಸ್ತಾಪಿಸಲಾಗಿದೆ. ಸದರಿ ಪ್ರಸ್ತಾವನೆಗಳನ್ನು 2018-19ನೇ ಸಾಲಿನ ದರಸೂಚಿ ದರಗಳಿಗೆ ರೂ.440.00 ಕೋಟಿಗಳಿಗೆ ಸಲ್ಲಿಸಿದ್ದು, ರೂ.440.00 ಕೋಟಿಗಳ ಅನುದಾನ ಅವಶ್ಯಕವಾಗಿರುತ್ತದೆ.

ಸದರಿ ರಸ್ತೆಗಳನ್ನು 2011-2016ನೇ ಸಾಲಿನಲ್ಲಿ ನಿರ್ಮಿಸಲಾಗಿರುತ್ತದೆ. ಪ್ರಸ್ತುತ ರಸ್ತೆಯ Roughness index ಸೂಚ್ಯಂಕವು ವರ್ಷಗಳು ಕಳೆದಂತೆ ನಿಗದಿತ ಸೂಚ್ಯಂಕ 3000 ಮಿ.ಮೀ / ಕಿ.ಮೀ ಗಿಂತ ಹೆಚ್ಚಾಗುತ್ತಿದ್ದು, ರಸ್ತೆಯ ಕಾರ್ಯಕ್ಷಮತೆಯ ಮಟ್ಟ Performance level ಕುಸಿಯುತ್ತಿದ್ದು, ನವೀಕರಣ ಕಾಮಗಾರಿಯನ್ನು ಕೈಗೊಳ್ಳುವ ಅವಶ್ಯಕತೆ ಇರುತ್ತದೆ. ಸಕಾಲದಲ್ಲಿ ರಸ್ತೆಯ ಮೇಲ್ಪದರದ ನವೀಕರಣ ಕಾಮಗಾರಿಗಳನ್ನು ಕೈಗೊಂಡಲ್ಲಿ ಸುಮಾರು 5 ರಿಂದ 6 ವರ್ಷದವರೆಗೆ ನಿಗಧಿತ ಕಾರ್ಯಕ್ಷಮತೆಯ ಮಟ್ಟವನ್ನು ಕಾಯ್ದುಕೊಳ್ಳಬಹುದಾಗಿರುತ್ತದೆ. ಪ್ರಸ್ತಾಪಿತ ರಸ್ತೆಗಳಲ್ಲಿ ಬಹುತೇಕ ರಸ್ತೆಗಳಲ್ಲಿ ಟೋಲ್ ಶುಲ್ಕ ಸಂಗ್ರಹಿಸಲಾಗುತ್ತಿದ್ದು, ಸಕಾಲಿಕ ನಿರ್ವಹಣೆಯಿಂದ ರಸ್ತೆ ಬಳಕೆದಾರರಿಗೆ ಸುಗಮ ಸಂಚಾರ ಹಾಗೂ ಸುರಕ್ಷತೆಯನ್ನು ನೀಡಬಹುದಾಗಿರುತ್ತದೆ.

964
02/9/22
AE-3

ಪ್ರಸ್ತುತ ಸದರಿ ರಸ್ತೆಗಳ ವಸ್ತುಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು ನಿರ್ವಹಣೆಯನ್ನು ತಡವಾಗಿ ಮಾಡುವುದರಿಂದ ರಸ್ತೆ ಪದರಗಳು ಹಾಳಾಗುವ ಸಂಭವವನ್ನು ತಡೆಗಟ್ಟಲು ರಸ್ತೆಗಳ ನಿರ್ವಹಣೆ/ನವೀಕರಣ ಕಾರ್ಯವನ್ನು ಕೈಗೊಳ್ಳುವುದರಿಂದ, ಸುಸ್ಥಿರತೆಯನ್ನು ಕಾಲಕಾಲದವರೆಗೆ ಕಾಪಾಡಬಹುದಾಗಿದೆ. ನಿರ್ವಹಣಾ ಕಾಮಗಾರಿಯನ್ನು ಕೈಗೊಳ್ಳದಿದ್ದಲ್ಲಿ ರಸ್ತೆಯ ಕೆಳಪದರಗಳಿಗೂ ಧಕ್ಕೆ ಉಂಟಾಗುವ ಸಂಭವ ಎದುರಿಸಬೇಕಾಗುತ್ತದೆ. ಹಾಲಿ ಕೆಆರ್‌ಡಿಸಿಎಲ್ ನಿಂದ 17 ರಸ್ತೆಗಳಲ್ಲಿ ಶುಲ್ಕ ಸಂಗ್ರಹಣೆ ಮಾಡಲಾಗುತ್ತಿದೆ. ಇದರಿಂದ ವಾರ್ಷಿಕ ಆದಾಯ ರೂ.55.00 ಕೋಟಿಗಳಿದ್ದು, ಉಳಿಕೆ 10 ರಸ್ತೆಗಳಲ್ಲಿ ಟೋಲ್ ಗುತ್ತಿಗೆಯನ್ನು ನಿಗಧಿಪಡಿಸಬೇಕಾಗಿದ್ದು, ಇವುಗಳಿಂದ ಸುಮಾರು ರೂ.45.00 ಕೋಟಿಗಳ ವಾರ್ಷಿಕ ಆದಾಯ ನಿರೀಕ್ಷಿಸಲಾಗಿದೆ.

ಮೇಲಿನ ಅಂಶಗಳನ್ನು ಗಣನೆಗೆ ತೆಗೆದುಕೊಂಡು ಪ್ರಸ್ತಾವನೆಯನ್ನು ಕೂಲಂಕಶವಾಗಿ ಪರಿಶೀಲಿಸಲಾಗಿದ್ದು, ಈ ಕೆಳಗಿನಂತೆ ಆದೇಶವನ್ನು ಹೊರಡಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಲೋಇ ಇ-372 ಇಎಪಿ 2021, ಬೆಂಗಳೂರು ದಿನಾಂಕ: 18-08-2022**

ಕೆಶಿಫ್, ಕೆ.ಆರ್.ಡಿ.ಸಿ.ಎಲ್ ಮತ್ತು ಲೋಕೋಪಯೋಗಿ ಇಲಾಖೆಯ ವತಿಯಿಂದ ಅಭಿವೃದ್ಧಿಪಡಿಸಲಾದ 1329.47 ಕಿಮೀ ಉದ್ದದ ಅನುಬಂಧದಲ್ಲಿರುವ ರಸ್ತೆಗಳ ಮೇಲ್ಮೈ ಪದರಗಳ ನವೀಕರಣ ಹಾಗೂ ಇತರೆ ಕಾಮಗಾರಿಯನ್ನು ಕೆಆರ್‌ಡಿಸಿಎಲ್ ವತಿಯಿಂದ ಕೈಗೆತ್ತಿಕೊಳ್ಳಲು ರೂ. 440.00 ಕೋಟಿಗಳ ಅಂದಾಜು ಮೊತ್ತಕ್ಕೆ ಈ ಕೆಳಗಿನ ಷರತ್ತಿಗೊಳಪಟ್ಟು ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

1. ಕ್ರಿಯಾ ಯೋಜನೆಯಲ್ಲಿ ಸೇರ್ಪಡೆಗೊಂಡ ಕಾಮಗಾರಿಗಳು ಬೇರೆ ಯಾವುದೇ ಇಲಾಖೆಯ ಅಥವಾ ಕಾರ್ಯಕ್ರಮಗಳ ಕ್ರಿಯಾ ಯೋಜನೆಯಲ್ಲಿ ಸೇರ್ಪಡೆಯಾಗದಿರುವುದನ್ನು ಖಚಿತಪಡಿಸಿಕೊಳ್ಳತಕ್ಕದ್ದು ಹಾಗೂ ಮಂಜೂರಾದ ಅನುದಾನದ ಮಿತಿಯೊಳಗೆ ಕಾಮಗಾರಿಗಳನ್ನು ಮುಕ್ತಾಯಗೊಳಿಸತಕ್ಕದ್ದು. ಯಾವದೇ ಕಾರಣದಿಂದಲೂ ಹೆಚ್ಚುವರಿ ಅನುದಾನಕ್ಕೆ ಹಾಗೂ ಬದಲಿ ಕಾಮಗಾರಿಗೆ ಪ್ರಸ್ತಾವನೆ ಸಲ್ಲಿಸತಕ್ಕದ್ದಲ್ಲ.

2. ಕ್ರಿಯಾ ಯೋಜನೆಯಲ್ಲಿನ ಕಾಮಗಾರಿಗಳಿಗೆ ಅಂದಾಜುಗಳನ್ನು ಸಿದ್ದಪಡಿಸಿಕೊಂಡು ಸಕ್ಷಮ ಪ್ರಾಧಿಕಾರದ ಆಡಳಿತಾತ್ಮಕ/ತಾಂತ್ರಿಕ ಅನುಮೋದನೆಯೊಂದಿಗೆ ಕಾಮಗಾರಿಗಳನ್ನು ಕೈಗೊಳ್ಳತಕ್ಕದ್ದು ಹಾಗೂ ಅನುಮೋದಿತ ಕಾಮಗಾರಿಗಳನ್ನು ಲೋಕೋಪಯೋಗಿ ಇಲಾಖಾ ಸಂಹಿತೆ ಪ್ರಕಾರ ನಿರ್ವಹಿಸಲು ಕ್ರಮವಹಿಸತಕ್ಕದ್ದು.

3. ಕ್ರಿಯಾ ಯೋಜನೆಯಲ್ಲಿ ಸೇರ್ಪಡೆಯಾಗಿರುವ ಕಾಮಗಾರಿಗಳಿಗೆ ನಿಗದಿಪಡಿಸಿಕೊಂಡಿರುವ ಅಂದಾಜು ಮೊತ್ತದ ಮಿತಿಯಲ್ಲಿಯೇ ಅನುಷ್ಠಾನಗೊಳಿಸತಕ್ಕದ್ದು.

4. ಮುಖ್ಯ ಇಂಜಿನಿಯರ್ ಹಾಗೂ ಸಂಬಂಧಪಟ್ಟ ವೃತ್ತದ ಅಧೀಕ್ಷಕ ಇಂಜಿನಿಯರ್ ಹಾಗೂ ವಿಭಾಗಗಳ ಕಾರ್ಯಪಾಲಕ ಇಂಜಿನಿಯರ್ ರವರುಗಳು ಕಾಲಕಾಲಕ್ಕೆ ಈ ಕಾಮಗಾರಿಗಳ ಅನುಷ್ಠಾನದ ಬಗ್ಗೆ ಸ್ಥಾನಿಕ ಪರಿಶೀಲನೆ ಮಾಡಿ ಗುಣಮಟ್ಟದ ಕಾಮಗಾರಿ ಕೈಗೊಂಡಿರುವ ಬಗ್ಗೆ ಖಚಿತಪಡಿಸಿಕೊಳ್ಳತಕ್ಕದ್ದು.

5. ಕಾಮಗಾರಿಗಳನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆ ಪಾರದರ್ಶಕ ಅಧಿನಿಯಮ ಮತ್ತು ನಿಯಮಗಳ ಅಡಿಯಲ್ಲಿ ಹಾಗೂ ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ:02:ಇ-ಸಂಗ್ರ:2009, ದಿನಾಂಕ: 09-10-2012 ರ ಪ್ರಕಾರ ಹಾಗೂ ಆರ್ಥಿಕ ಇಲಾಖೆಯ ಅಧಿಸೂಚನೆ ಸಂಖ್ಯೆ: FD 884 Exp-12/2019, ದಿನಾಂಕ: 07-05-2020 ರಂತೆ ಹಾಗೂ ಕೆಟಿಪಿಪಿ ಕಾಯ್ದೆಗೆ ಆಗಿರುವ ಎಲ್ಲ ತಿದ್ದುಪಡಿ ಆದೇಶದಂತೆ ಟೆಂಡರ್ ಕರೆದು ನಿರ್ವಹಣೆಗೆ ಕ್ರಮವಹಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಹಿಂಬರಹ ಸಂಖ್ಯೆ: ಆಇ 73 ಆಕೋ-2/2021 (ಇ-ಆಫೀಸ್) ದಿನಾಂಕ: 02-08-2022 ರನ್ವಯ ಹೊರಡಿಸಲಾಗಿದೆ.

**ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ**
**ಮತ್ತು ಅವರ ಹೆಸರಿನಲ್ಲಿ**

18/08/2022

**(ರಾಮಚಂದ್ರಪ್ಪ ಕೆ.ಎನ್)**
ಸರ್ಕಾರದ ಅಧೀನ ಕಾರ್ಯದರ್ಶಿ
ಬಾಹ್ಯ ಅನುದಾನಿತ ಯೋಜನೆಗಳು (ಇಎಪಿ)
ಲೋಕೋಪಯೋಗಿ ಇಲಾಖೆ

ಗೆ,
ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು ಮುಂದಿನ ರಾಜ್ಯ ಪತ್ರದಲ್ಲಿ ಪ್ರಕಟಿಸಲು.

ಪ್ರತಿಯನ್ನು :-

1. ಮಹಾಲೇಖಪಾಲರು (ಅಕೌಂಟ್ಸ್) ಕರ್ನಾಟಕ, ಬೆಂಗಳೂರು.
2. ಸನ್ಮಾನ್ಯ ಮುಖ್ಯ ಮಂತ್ರಿಯವರ ಅಪರ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, ವಿಕಾಸಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, ವಿಕಾಸಸೌಧ, ಬೆಂಗಳೂರು.
6. ಸರ್ಕಾರದ ಮುಖ್ಯ ಕಾರ್ಯದರ್ಶಿ ರವರ ಜಂಟಿ ಕಾರ್ಯದರ್ಶಿ, ಸಚಿವ ಸಂಪುಟ ಶಾಖೆ, ವಿಧಾನ ಸೌಧ, ಬೆಂಗಳೂರು ದಿನಾಂಕ: 11-08-2022 ರಂದು ಕಾರ್ಯ ಸೂಚಿ ಸಂಖ್ಯೆ: 24 ರ ಪ್ರಕಾರ ಹೊರಡಿಸಿ ಕಳುಹಿಸಲಾಗಿದೆ.
7. ವಿಶೇಷಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಉಪಕಾರ್ಯದರ್ಶಿ, (ಆರ್ಥಿಕ ಕೋಶ) ಲೋಕೋಪಯೋಗಿ ಇಲಾಖೆ, ವಿಧಾನಸೌಧ, ಬೆಂಗಳೂರು.
8. ಆಂತರಿಕ ಆರ್ಥಿಕ ಸಲಹೆಗಾರರು, ಲೋಕೋಪಯೋಗಿ ಇಲಾಖೆ, ವಿಕಾಸಸೌಧ, ಬೆಂಗಳೂರು.
9. ಸರ್ಕಾರದ ಉಪಕಾರ್ಯದರ್ಶಿ, (ಸಂ ಮತ್ತು ಕ), ಲೋಕೋಪಯೋಗಿ ಇಲಾಖೆ, ವಿಕಾಸಸೌಧ, ಬೆಂಗಳೂರು.
10. ಮುಖ್ಯ ಯೋಜನಾಧಿಕಾರಿ, ಕರ್ನಾಟಕ ರಾಜ್ಯ ಹೆದ್ದಾರಿ ಅಭಿವೃದ್ಧಿ ಯೋಜನೆ, ಬೆಂಗಳೂರು.
11. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು.
12. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಬೆಂಗಳೂರು.
13. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ಉತ್ತರ), ಧಾರವಾಡ.
14. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ಈಶಾನ್ಯ), ಕಲಬುರಗಿ.
15. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ಕೇಂದ್ರ), ಶಿವಮೊಗ್ಗ.
16. ಪ್ರಧಾನ ಇಂಜಿನಿಯರ್, PRAMC, ಲೋಕೋಪಯೋಗಿ ಇಲಾಖೆ, ಕೆ.ಆರ್ ವೃತ್ತ, ಬೆಂಗಳೂರು ರವರಿಗೆ ವೆಬ್ ಸೈಟ್ ನಲ್ಲಿ ಪ್ರಕಟಿಸಲು.
17. ಕಡತ / ಹೆಚ್ಚುವರಿ ಪ್ರತಿಗಳು.